# <u>ಪ್ರಥಮ ದರ್ಜೆಯ  ನ್ಯಾಯಿಕ ದಂಡಾಧಿಕಾರಿಯವರ ಕಾರ್ಯಾಲಯ,</u>

# <u>ನಂಜನಗೂಡು</u>

**ಓ ಎಸ್ ನಂ.18-2015** **ಪಿ . ಡಬ್ಲುಃ 1**

| | |
|---|---|
| ಸಾಕ್ಷಿದಾರರ ಹೆಸರು<br>ತಂದೆಯ/ಗಂಡನ ಹೆಸರು<br>ವಯಸ್ಸು<br>ಉದ್ಯೋಗ<br>ವಾಸ್ತವ್ಯ | ಸಿ.ಕೃಷ್ಣಮೂರ್ತಿ<br>ಲೇ.ಚೆನ್ನರಾಯಪ್ಪ<br>50 ವರ್ಷ<br>ಚಾಲಕ<br>ಬೆಂಗಳೂರು |
| | **ಸತ್ಯ ಪ್ರತಿಜ್ಞೆಯ ಮೇರೆಗೆ  ದಿನಾಂಕ 07-04-2022.** |

**<u>ಮುಂದುವರೆ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಎಸ್.ಎಸ್.ಜಿ  ರವರಿಂದಃ-</u>**

ದಿ.26-09-2012 ರಂದು ಪ್ರತಿವಾದಿ ನನಗೆ ಬರೆದುಕೊಟ್ಟ ಶುದ್ಧ ಕ್ರಯದ ಒಪ್ಪಂದದ ಕರಾರನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-1 ಎಂದು, ಅದರಿ ಮೇಲಿರುವ ಪ್ರತಿವಾದಿ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಎ) ಎಂದು, ನಿಪಿ-1 ಕ್ಕೆ ಸಾಕ್ಷಿಗಳಾಗಿ ನಂಜನಗೂಡಿನ ಪುಟ್ಟಸ್ವಾಮಿ ಹಾಗೂ ಮಹೇಶ ರವರು ಸಹಿ ಮಾಡಿದ್ದು ಅವರ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1(ಬಿ ಮತ್ತು ಸಿ) ಎಂದು, ನಿಪಿ-1 ನ್ನು ಬಿಕ್ಲಂ ದಾರರಾದ ನಾಗರಾಜು ರವರು ಬರೆದಿದ್ದು ಅವರ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಡಿ) ಎಂದು, ದಿ.30-10-2014 ರಂದು ನನ್ನ ವಕೀಲರ ಮೂಲಕ ಪ್ರತಿವಾದಿಳಿಗೆ ಕಳುಹಿಸಿದ ನೋಟಿಸ್ ನ್ನು  ಹಾಜರುಪಡಿಸುತ್ತಿದ್ದು ಅದನ್ನು ನಿಪಿ-2 ಎಂದು, ಅಂಚೆ ರಶೀದಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

(ಮುಂದುವರಿದ ಮುಖ್ಯ ವಿಚಾರಣೆಗೆ ವಕೀಲರು ಸಮಯಾವಕಾಶವನ್ನು ಕೇಳಿರುವುದರಿಂದ  ಸಮಯಾವಕಾಶವನ್ನು ನೀಡಲಾಯಿತು)

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/-**

**2 ನೇ ಪ್ರ.ದ. ನ್ಯಾ ದಂ. ನಂಜನಗೂಡು**